ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1085/2025</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಅಶೋಕ್ ಬಿ.ಪಿ | ಪಿ.ಡಬ್ಲ್ಯೂ.2 |
| ತಂದೆಯ ಹೆಸರು | : | ಪುಟ್ಟೇಗೌಡ | ಸಿ.ಡಬ್ಲ್ಯೂ.3 |
| ವಯಸ್ಸು | : | 55 ವರ್ಷ | |
| ವೃತ್ತಿ | : | ವ್ಯವಸಾಯ | |
| ವಾಸ | : | ಬಾಳೆಹಳ್ಳಿ | |

<u>ದಿನಾಂಕಃ 11-11-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿ ಗೊತ್ತು. ಚಾಸಾ-2 ರವರ ಪರಿಚಯವಿದೆ. ನೋಟೀಸ್ ಮತ್ತು ಮಹಜರ್ ಅನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಮತ್ತು ನಿಪಿ-2 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-1(ಬಿ) ಮತ್ತು ನಿಪಿ-2(ಬಿ) ಇರುತ್ತದೆ. ಯಾವ ವಿಚಾರಕ್ಕಾಗಿ ಸದರಿ ಸಹಿಯನ್ನು ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ಕಬ್ಬಿಣಸೇತುವೆ ಹತ್ತಿರ ಹಾಕಿರುತ್ತೇನೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಆ ಸಮಯದಲ್ಲಿ ಭಾವಚಿತ್ರವನ್ನು ತೆಗೆದಿರುತ್ತಾರೆ. 2 ಭಾವಚಿತ್ರಗಳನ್ನು ನೋಡುತ್ತಿದ್ದು ಅವುಗಳನ್ನು ಒಟ್ಟಾಗಿ ನಿಪಿ-3 ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಸಂಜೆಃ06.00

ಗಂಟೆಗೆ ಹಾಕಿರುತ್ತೇನೆ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ದಿಃ28.03.2025 ರಂದು ರಾತ್ರಿಃ07.40 ರಿಂದ 08.40 ರವರೆಗೆ ಪೊಲೀಸರು ಘಟನಾ ಸ್ಥಳದಲ್ಲಿ ನಿಪಿ-2 ರಂತೆ ಮಹಜರ್ ಅನ್ನು ತಯಾರಿಸಿದಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ವಿಷಯಗಳನ್ನು ತಿಳಿದುಕೊಂಡು ನಿಪಿ-2(ಬಿ) ರಂತೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಈಗ ನನಗೆ ತೋರಿಸುತ್ತಿರುವ ಭಾವಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ02.04.2025 ರಂದು ನಾನು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ‘ ದಿಃ28.03.2025 ರಂದು ---- ಪುನಃ ನೋಡಿದರೆ ಗುರುತಿಸುತ್ತೇನೆ’ ಎಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಕೂಡಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

C.C.No.1085/2025
PW-2 CW-3

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ